Date.....
Bangalore.
Karnataka Legislature Library

ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಸರಕಾರಿ ಹಿರಿಯ ಪ್ರಾಥಮಿಕ ಮತ್ತು ಸರಕಾರಿ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಶಿಕ್ಷಕರ ಹುದ್ದೆಗಳ ಬಗ್ಗೆ.

೧೨೦೯. (ಎ) ಶ್ರೀ ಕೆ. ವಸಂತ ಬಂಗೇರ (ಬೆಳ್ತಂಗಡಿ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಮತ್ತು ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಶಿಕ್ಷಕರ ಹುದ್ದೆಗಳು ಎಷ್ಟು ವರ್ಷಗಳಿಂದ ಖಾಲಿ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ ?

ಆ) ಹಾಗಿದ್ದಲ್ಲಿ ಈ ಹುದ್ದೆಗಳಿಗೆ ನೇಮಕಾತಿಯನ್ನು ಯಾವಾಗ ಮಾಡಲಾಗುವುದು ?

ಶ್ರೀ ಡಿ. ಮಂಜುನಾಥ್ (ಶಿಕ್ಷಣ ಮಂತ್ರಿಗಳು).—

ಅ) ಬಂದಿದೆ. ಎರಡು ವರ್ಷಗಳಿಂದ ಪ್ರಾಥಮಿಕ ಶಾಲಾ ಶಿಕ್ಷಕರ ೫೦೬೩ ಹುದ್ದೆಗಳು ಖಾಲಿ ಇವೆ. ಇವುಗಳಲ್ಲಿ ೩೭೨೬ ಹುದ್ದೆಗಳನ್ನು ತಾತ್ಕಾಲಿಕವಾಗಿ ಗಂತ್ತಿಗೆ ಆಧಾರದ ಮೇಲೆ ತುಂಬಿದೆ.

ಆ) ಜಿಲ್ಲಾ ಆಯ್ಕೆ ಸಮಿತಿಗಳ ಮೂಲಕ ನೇರ ನೇಮಕಾತಿಯೆಂದು ತುಂಬಲು ಅಗತ್ಯ ಕ್ರಮ ಗಳನ್ನು ತೆಗೆದುಕೊಳ್ಳಲಾಗುತ್ತಿದೆ.

ರಾಜ್ಯದಲ್ಲಿ ವಿವಿಧ ತಾಲ್ಲೂಕುಗಳಿಗೆ ಕ್ರೀಡಾ ಕೇಂದ್ರಗಳನ್ನು ಮಂಜೂರು ಮಾಡುವ ಬಗ್ಗೆ

೧೨೧೧. ಶ್ರೀ ಕೆ. ವಸಂತ ಬಂಗೇರ (ಬೆಳ್ತಂಗಡಿ).——ಮಾನ್ಯ ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವಾ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ವಿವಿಧ ತಾಲ್ಲೂಕುಗಳಿಗೆ ಮಂಜೂರಾದ ಗ್ರಾಮೀಣ ಕ್ರೀಡಾ ಕೇಂದ್ರಗಳ ಶಾರೀರಿಕ ಶಿಕ್ಷಕರಿಗೆ ಕಳೆದ ಮೂರು ವರ್ಷಗಳಿಂದ ಅವರಿಗೆ ಮಾಸಿಕ ಸಂಭಾವನೆ ಪಾವತಿಯಾಗದೇ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಈ ಮಾಸಿಕ ಸಂಭಾವನೆ ಕೇಂದ್ರ ಸರ್ಕಾರ ನೀಡುವುದೇ ಆಥವಾ ರಾಜ್ಯ ಸರ್ಕಾರವೇ ?

ಇ) ಈ ಶಿಕ್ಷಕರ ಮಾಸಿಕ ಸಂಭಾವನೆಯನ್ನು ಎಷ್ಟು ಸಮಯದೊಳಗೆ ಪಾವತಿ ಮಾಡ ಲಾಗುವುದು ?

ಶ್ರೀ ಜೀವರಾಜ ಆಳ್ವ (ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವಾ ಸಚಿವರು).—

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಸದರಿ ಸಂಭಾವನೆಯ ವೆಚ್ಚದ ಒಟ್ಟು ಮೊತ್ತದ ಅರ್ಧ ಭಾಗವನ್ನು ಕೇಂದ್ರ ಸರ್ಕಾರವು ಅನುದಾನ ರೂಪದಲ್ಲಿ ನೀಡಲಿದ್ದು ಉಳಿದ ಅರ್ಧ ಭಾಗವನ್ನು ರಾಜ್ಯ ಸರ್ಕಾರ ಭರಿಸುತ್ತದೆ.

ಇ) ಕೇಂದ್ರ ಸರ್ಕಾರ ಎರಡನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಿದ ಕೂಡಲೇ ಸಂಭಾವನೆಯನ್ನು ಪಾವತಿ ಮಾಡಲು ಕ್ರಮ ಕೈಕೊಳ್ಳಲಾಗುವುದು.

ಕುಂದಾಪುರ ಕ್ಷೇತ್ರದ ಅವರ್ಸೆ ಗ್ರಾಮದಲ್ಲಿರುವ ಸರಕಾರಿ ಪ್ರೌಢ ಶಾಲೆಗೆ ಮಂಜೂರಾದ ಹುದ್ದೆ ಬಗ್ಗೆ

೧೦೦೪. ಶ್ರೀ ಕೆ. ಪ್ರತಾಪ ಚಂದ್ರ ಶೆಟ್ಟಿ (ಕುಂದಾಪುರ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕುಂದಾಪುರ ಕ್ಷೇತ್ರದ ಅವರ್ಸೆ ಗ್ರಾಮದಲ್ಲಿರುವ ಸರ್ಕಾರಿ ಪ್ರೌಢಶಾಲೆಗೆ ಮಂಜೂರಾದ ವಿವಿಧ ದರ್ಜೆಯ ಹುದ್ದೆಗಳೆಷ್ಟು ?